19

ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

# ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಪಾವಗಡ-561202

# ಸಂವಿಧಾನ ದಿನಾಚರಣೆ

ದಿನಾಂಕ: 26-11-2020 ರಂದು ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಪಾವಗಡ ಇದರ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಭಾರತೀಯ ಸಂವಿಧಾನ ದಿನಾಚರಣೆಯನ್ನು ಕಾಲೇಜಿನ ಆವರಣದಲ್ಲಿ ಆಯೋಜಿಸಲಾಗಿತ್ತು.



ಕಾಲೇಜಿನ ಪ್ರಾಂಶುಪಾಲರಾದ ಶ್ರೀಯುತ ಮಾರಪ್ಪ ಕೆ ಓ ರವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಮಾರಪ್ಪ ಕೆ ಓ ರವರು ಮಾತನಾಡುತ್ತಾ ಭಾರತೀಯ ಸಂವಿಧಾನದ ರಚನೆ ಮತ್ತು ಮಹತ್ವದ ಬಗ್ಗೆ ವಿವರಿಸಿದರು. ಸಂವಿಧಾನದ ಪೂರ್ವ ಪೀಠಿಕೆಯನ್ನು ಎಲ್ಲರಿಗೂ ಅರ್ಥವಾಗುವಂತೆ ವಿವರಿಸಿ ಸಂವಿಧಾನದ ಪೂರ್ವಪೀಠಿಕೆಯ ಪ್ರತಿಜ್ಞಾ ವಿಧಿಯನ್ನು ಎಲ್ಲರಿಗೂ ಬೋಧಿಸಿದರು.



ಕಾರ್ಯಕ್ರಮದ ಪ್ರಧಾನ ಭಾಷಣಕಾರರಾಗಿ ಎನ್.ಎಸ್.ಎಸ್ ಘಟಕದ ಸಂಚಾಲಕರಾದ ಶ್ರೀಮತಿ ಸುಮಾದೇವಿರವರು ಸಂವಿಧಾನದ ರಚನೆ ಚೌಕಟ್ಟು ಹಾಗೂ ಕಾರ್ಯಾಚರಣೆಯ ಅಂಶಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿದರು. ಸಹಾಯಕ ಪ್ರಾಧ್ಯಾಪಕರಾದ ಕುಮಾರಿ ರಾಮಾಂಜಿನಮ್ಮ ರವರು ಮೂಲಭೂತ ಕರ್ತವ್ಯಗಳ ಬಗ್ಗೆ ತಿಳಿಸಿದರು. ಅನಂತರಾಜುರವರು ಸಂವಿಧಾನದ ಹೃದಯ ಮತ್ತು ಆತ್ಮ ಎಂದು ಕರೆಯಲಾಗುವ ಸಂವಿಧಾನದ ವಿಧಿ 32 ರ ಮಹತ್ವವನ್ನು ವಿವರಿಸದರು. ಅಂತಿಮ ವರ್ಷದ ಪದವಿ ವಿದ್ಯಾರ್ಥಿನಿ ಕುಮಾರಿ ಶಿಲ್ಪರವರು ತಮ್ಮ ಅನಿಸಿಕೆಯನ್ನು ಹಂಚಿಕೊಂಡರು. ದೈಹಿಕ ಶಿಕ್ಷಣ ನಿರ್ದೇಶಕರಾದ ಮಧುಕುಮಾರ್ ಎಂ ರವರು ಪ್ರಾಸ್ತಾವಿಕ ನುಡಿಗಳನ್ನಾಡಿ ಕಾರ್ಯಕ್ರಮದ ನಿರೂಪಣೆ ಮಾಡಿದರು. ಸಹಾಯಕ ಪ್ರಾಧ್ಯಾಪಕರಾದ ಶ್ರೀ ಅನಂತರಾಜುರವರು ವಂದನಾರ್ಪಣೆ ಸಲ್ಲಿಸಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕರು, ಬೋಧಕೇತರ ಸಿಬ್ಬಂದಿ ಹಾಗೂ ಅಂತಿಮ ಪದವಿಯ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

IQAC Co-ordinator
Govt First Grade College for Women
Pavagada-561202

ಪ್ರಾಂಶುಪಾಲರು
ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು
ಪಾವಗಡ-561202.